ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/97/ಸುತ್ತೋಲೆ/2016-17

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:16.09.2016.

# ಸುತ್ತೋಲೆ

**ವಿಷಯ:** ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹೆಚ್ಚುವರಿ ತರಗತಿಗಳನ್ನು ನಡೆಸುವ ಬಗ್ಗೆ.

* * * * * * *

ಇತ್ತೀಚಿನ ದಿನಗಳಲ್ಲಿ ರಾಜ್ಯದಲ್ಲಿ ನಡೆದ ಬಂದ್/ಮುಷ್ಕರಗಳ ಹಿನ್ನೆಲೆಯಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡಲು ಹಾಗೂ ವಿದ್ಯಾರ್ಥಿಗಳ ಸುರಕ್ಷತೆಯ ದೃಷ್ಟಿಯಿಂದ ಶಾಲಾ-ಕಾಲೇಜುಗಳಿಗೆ ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಗಳು ರಜೆಯನ್ನು ಘೋಷಿಸಿದ್ದನ್ನು ಗಮನಿಸಲಾಗಿದೆ. ಇದರಿಂದಾಗಿ ಇಲಾಖಾ ವ್ಯಾಪ್ತಿಯ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ತರಗತಿಗಳು ನಡೆಯದೆ ವಿದ್ಯಾರ್ಥಿಗಳ ಪಾಠ ಪ್ರವಚನಗಳಿಗೆ ತೊಂದರೆಯುಂಟಾಗಿರುವುದು ಕಂಡುಬಂದಿರುತ್ತದೆ. ಪರೀಕ್ಷಾ ದಿನಗಳು ಸಮೀಪಿಸುತ್ತಿದ್ದು, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಬಾಕಿ ಉಳಿಕೆಯಾಗಿರುವ ಪಾಠ-ಪ್ರವಚನಗಳನ್ನು (**Syllabus**) ಪ್ರತಿ ಶನಿವಾರಗಳಂದು ಪೂರ್ತಿ ದಿನ ಹಾಗೂ ಸಾರ್ವಜನಿಕ ರಜಾ ದಿನಗಳಂದು ಹೆಚ್ಚುವರಿಯಾಗಿ ತರಗತಿಗಳನ್ನು ತೆಗೆದುಕೊಂಡು ಸರಿದೂಗಿಸುವಂತೆ ಅಗತ್ಯ ಕ್ರಮ ಕೈಗೊಳ್ಳಲು ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ ಹಾಗೂ ಈ ಬಗ್ಗೆ ಕೈಗೊಂಡಿರುವ ಕ್ರಮದ ಕುರಿತು ಈ ಕಛೇರಿಗೆ ವರದಿಯನ್ನು ನೀಡುವಂತೆ ಈ ಮೂಲಕ ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ನಿರ್ದೇಶಕರು**

**ಇವರಿಗೆ:**

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ- ಈ ಬಗ್ಗೆ ಕೂಡಲೇ ತಮ್ಮ ಆಡಳಿತ ವ್ಯಾಪ್ತಿಯ ಕಾಲೇಜುಗಳ ಪ್ರಾಂಶುಪಾಲರಿಗೆ ಸೂಕ್ತ ನಿರ್ದೇಶನ ನೀಡುವಂತೆ ಸೂಚಿಸಲಾಗಿದೆ.
2) ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರ ಮೂಲಕ)
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾ.ಶಿ.ಆ. ಕಛೇರಿ, ಬೆಂಗಳೂರು- ಕೂಡಲೇ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮವಹಿಸುವುದು.

**ಪ್ರತಿಯನ್ನು ಮಾಹಿತಿಗಾಗಿ;**

1. ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, 3ನೇ ಮಹಡಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಕಛೇರಿ ಪ್ರತಿ.